# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 19, ಸಂಜಯನಗರ. ಬೆಂಗಳೂರು.**

ಸಂಖ್ಯೆ: ಸ.ಅ/ವಾ–19/ಪಿ.ಆರ್/01 /2022–23 ದಿನಾಂಕ:–10–08–2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020–21 ದಿನಾಂಕ:–21–09–2020. ರವರ ಆದೇಶದಂತೆ ದಿನಾಂಕ:–10–08–2022 ರಂದು ವಾರ್ಡ್ ನಂ:19 ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**::ಸಭೆಗೆ ಹಾಜರಾಗಿದ್ದವರ ವಿವರಗಳು::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಶ್ರೀಮತಿ. ಜ್ಯೋತಿ.ಜಿ ಚೌಳೂಲ್ಕರ್ ಸ.ಕಾ.ನಿ (ಘ.ತ್ಯಾ.ನಿ) ಪುಲಿಕೇಶಿ ನಗರ ವಿಭಾಗ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಶ್ರೀ. ನವನಾಥ್ | ಸದಸ್ಯ ಕಾರ್ಯದರ್ಶಿ ಮತ್ತು ಸಹಾಯಕ ಅಭಿಯಂತರರು ವಾರ್ಡ್ ನಂ:19 | |
| 3. | ಶ್ರೀ. ಸಲ್ಮಾನ್ | ಹಿರಿಯ ಆರೋಗ್ಯ ಪರಿವೀಕ್ಷಕರು. | |
| 4. | ವಾಟರ್ ಇನ್ಸ್‌ಪೆಕ್ಟರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಜಯನಗರ | |
| 5. | ತೋಟಗಾರಿಕಾ ಇನ್ಸ್‌ಪೆಕ್ಟರ್ | ತೋಟಗಾರಿಕಾ ಇಲಾಖೆ. | |
| 6. | ಪೊಲೀಸ್ ಅಧಿಕಾರಿಗಳು | ಸಂಜಯನಗರ ಪೊಲೀಸ್ ಠಾಣೆ | |
| 7. | ಸಂಚಾರಿ ಪೊಲೀಸ್ ಅಧಿಕಾರಿಗಳು | ಸಂಚಾರಿ ಪೊಲೀಸ್ ಠಾಣೆ, ಆರ್.ಟಿ ನಗರ. | |
| 8. | ಬೀದಿ ದೀಪ ನಿರ್ವಾಹಕರು | Street light Incharge, B B M P. | |
| 9. | | ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ.ನವನಾಥ್, ಸಹಾಯಕ ಅಭಿಯಂತರರು ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀಮತಿ ಜ್ಯೋತಿ.ಜಿ ಚೋಳೂಲ್ಕರ್ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಸಾರ್ವಜನಿಕರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಸಂಜಯನಗರ ಮುಖ್ಯರಸ್ತೆ, ಭೂಪಸಂದ್ರ ಮುಖ್ಯರಸ್ತೆಗಳ ಪಾದಚಾರಿ ಮಾರ್ಗದ ಒತ್ತುವರಿಯಾಗಿರುವುದರಿಂದ ಸಂಚಾರ ಸಮಸ್ಯೆಯಾಗುತ್ತಿದ್ದು, ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ತೆರವುಗೊಳಿಸಲು ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಕೋರಿರುತ್ತಾರೆ. ಅದರಂತೆ ಸಹಾಯಕ ಅಭಿಯಂತರರು, ಬಿ.ಬಿ.ಎಂ.ಪಿ ಮತ್ತು ಸಂಚಾರಿ ಪೊಲೀಸ್ ವಿಭಾಗದವರು ಜೊತೆಯಾಗಿ ಒತ್ತುವರಿಯನ್ನು ತೆರವುಗೊಳಿಸಿ ಸಂಚಾರ ಸಮಸ್ಯೆಯನ್ನು ಬಗೆಹರಿಸಲು ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
2. ಕಲ್ಪನಾ ಚಾವ್ಲ ರಸ್ತೆ ಮತ್ತು 4ನೇ ಎ ಕ್ರಾಸ್ ಟೆಲಿಫೋನ್ ಎಕ್ಸ್‌ಚೇಂಜ್ ಹತ್ತಿರ ರಸ್ತೆಗಳ ಎರಡೂ ಬದಿ ಕಾರುಗಳ ಪಾರ್ಕಿಂಗ್ ಮಾಡುವುದರಿಂದ ವಾಹನಗಳ ಓಡಾಟಕ್ಕೆ ತೊಂದರೆಯುಂಟಾಗಿರುತ್ತದೆ ಎಂದು ವಾರ್ಡ್‌ನ ಸಾರ್ವಜನಿಕರು ಮಾಹಿತಿ ನೀಡಿರುತ್ತಾರೆ. ನೋಡಲ್ ಅಧಿಕಾರಿಗಳು ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸುವಂತೆ ಸಂಚಾರಿ ಪೊಲೀಸರಿಗೆ ಸೂಚಿಸಿದರು.
3. ಸಂಜಯನಗರದಲ್ಲಿ ಬರುವ ಉದ್ಯಾನವನಗಳಲ್ಲಿ ಮರದ ರೆಂಬೆ ಕೊಂಬೆಗಳು ಜೊತು ಬಿದ್ದಿದ್ದು, ಅವುಗಳನ್ನು ತೆರವುಗೊಳಿಸುವಂತೆ ಹಾಗೂ ಉದ್ಯಾನವನಗಳ ನಿರ್ವಹಣೆ ಮಾಡುತ್ತಿರುವ ಬಗ್ಗೆ ಕ್ರಮವಹಿಸಲು ನೋಡಲ್ ಅಧಿಕಾರಿಗಳು ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.

4. ಸಂಜಯನಗರ ವಾರ್ಡ್‌ನಲ್ಲಿ ಬೆಸ್ಕಾಂ ರವರು ಯು.ಜಿ ಕೇಬಲ್‌ಗಳನ್ನು ಅಳವಡಿಸುತ್ತಿರುವ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆಯಲ್ಲಿ ಟ್ರಂಚ್‌ಗಳನ್ನು ಅಗೆಯುತ್ತಿದ್ದು, ರಸ್ತೆಗುಂಡಿಗಳು ನಿರ್ಮಾಣವಾಗುತ್ತಿದ್ದು, ರಸ್ತೆ ಅಗೆಯುವ ಸಂದರ್ಭದಲ್ಲಿ ವಾಟರ್ ಮತ್ತು ಸ್ಯಾನಿಟರಿ ಪೈಪ್‌ಗಳು ಒಡೆಯುತ್ತಿದ್ದು, ಸಮಸ್ಯೆಯುಂಟಾಗಿರುತ್ತಿದೆ ಎಂದು ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಕೋರಿರುತ್ತಾರೆ. ಸದರಿ ಪಾಟ್‌ಹೋಲ್ಸ್‌ಗಳನ್ನು ಬೆಸ್ಕಾಂ ಸಿಬ್ಬಂಧಿಯವರು ಸಂಬಂಧಿತ ಗುತ್ತಿಗೆದಾರರಿಂದ ಮುಚ್ಚಿಕೊಡಲು ಮತ್ತು ಒಡೆದಿರುವ ಪೈಪ್‌ಲೈನ್‌ಗಳನ್ನು ತುರ್ತಾಗಿ ಸರಿಪಡಿಸಲು ಬೆಸ್ಕಾಂ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

5. ವಾರ್ಡ್‌ನ ರಸ್ತೆ ಬದಿಯಲ್ಲಿ ಜೋತು ಬಿದ್ದಿರುವ ಮರಗಳ ರಂಬೆ ಕೊಂಬೆಗಳನ್ನು ಕತ್ತರಿಸಿ ತೆರವುಗೊಳಿಸಲು ಬಿ.ಬಿ.ಎಂ.ಪಿ ಅರಣ್ಯ ರವರಿಗೆ ಸೂಚಿಸಲು ನೋಡಲ್ ಅಧಿಕಾರಿಗಳು ವಾರ್ಡ್ ಸಹಾಯಕ ಅಭಿಯಂತರರಿಗೆ ತಿಳಿಸಿರುತ್ತಾರೆ.

6. ಸಂಜಯನಗರ ಮುಖ್ಯರಸ್ತೆಯಲ್ಲಿರುವ ಭಾರತ್ ಪೆಟ್ರೋಲ್ ಪಂಪ್ ಹತ್ತಿರ ಸ್ಯಾನಿಟರಿ ವಾಟರ್ ರಸ್ತೆಯ ಮೇಲೆ ಹರಿಯುತ್ತಿದ್ದು, ಸದರಿ ವಿಷಯದ ಬಗ್ಗೆ ಗಮನಹರಿಸಿ ಸರಿಪಡಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು. ಹಾಗೂ ರಘುವನ ಪಾರ್ಕ್ ಮತ್ತು 1ನೇ, 1ನೇ ಎ ರಸ್ತೆಯಲ್ಲಿ ಸಮರ್ಪಕವಾಗಿ ನೀರು ಬರುತ್ತಿಲ್ಲವೆಂದು ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆಯೂ ಕೂಡ ಗಮನ ಹರಿಸಿ ಬಗೆ ಹರಿಸಬೇಕಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

7. ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್ ರಸ್ತೆ ಮತ್ತು 4ನೇ ಎ ಕ್ರಾಸ್, ಟೆಲಿಫೋನ್ ಎಕ್ಸ್‌ಚೇಂಜ್ ಹತ್ತಿರ ಪುಂಡಪೋಕರಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಪೊಲೀಸ್ ಅಧಿಕಾರಿಗಳು ಸದರಿ ರಸ್ತೆಗಳಲ್ಲಿ ಬೀಟ್ ಹೋಡೆದು ಕ್ರಮ ವಹಿಸುವಂತೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ವಾರ್ಡ್‌ನ ಅಧ್ಯಕ್ಷರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಕೂಡಲೇ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸದಸ್ಯ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ. 19, ಸಂಜಯನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ.19, ಸಂಜಯನಗರ

<u>**ಪ್ರತಿಯನ್ನು:-**</u>

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.